ಅಧ್ಯಕ್ಷರು: ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ ರವರು ಗಮನಸೆಳೆದಿದ್ದಾರೆ ಸದನದಲ್ಲಿ ಹಾಜರಿಲ್ಲ. ಎಂ. ರಾಜಣ್ಣ ಹಾಜರಿಲ್ಲ, ಜೆ.ಟಿ. ಪಾಟೀಲ್ ರವರು ಸದನದಲ್ಲಿ ಹಾಜರಿಲ್ಲ.

6. ವಿಷಯ: ಕಲಬುರಗಿ ಜಿಲ್ಲೆಯ ಅಫಜಲಪೂರ ತಾಲ್ಲೂಕಿನಲ್ಲಿರುವ ರೈತರ ಜಮೀನುಗಳಲ್ಲಿನ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಪೂರೈಕೆಗಾಗಿ ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸುವ ಬಗ್ಗೆ.

ಶ್ರೀ ಅಪ್ಪಾಜಿ ಎಸ್. ನಾಡಗೌಡ (ಮುದ್ದೇಬಿಹಾಳ) (ಮಾಲೀಕಯ್ಯ ವೆಂಕಯ್ಯ ಗುತ್ತೇದಾರ್ ರವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ಮಾಲೀಕಯ್ಯ ಗುತ್ತೇದಾರ್‌ರವರು ಪತ್ರವನ್ನು ಕೊಟ್ಟಿದ್ದಾರೆ. ಕಲಬುರಗಿ ಜಿಲ್ಲೆಯ ಅಫಜಲಪೂರ ತಾಲ್ಲೂಕಿನಲ್ಲಿರುವ ರೈತರ ಜಮೀನುಗಳಲ್ಲಿನ ಪಂಪ್‌ಸೆಟ್‌ಗಳಿಗೆ ಅಗತ್ಯ ವಿದ್ಯುತ್ ಪೂರೈಕೆಗಾಗಿ ಡಿಗ್ಗಿ ಕ್ರಾಸ್ ಮತ್ತು ಸಾಗನೂರು ಬಳಿ 100 ಕೆ.ವಿ. ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯಲಿಚ್ಛಿಸುತ್ತೇನೆ.

ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಇಂಧನ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ಕಲಬುರ್ಗಿ ಜಿಲ್ಲೆಯ ಅಫಜಲಪೂರ ತಾಲ್ಲೂಕಿನಲ್ಲಿ ಭೀಮಾ ಏತ ನೀರಾವರಿ ಯೋಜನೆಯ ಅಳ್ಳಗಿ (ಬಿ.) (ಡಿಗ್ಗಿಕ್ರಾಸ್) ಪ್ರದೇಶಗಳಿಗೆ ಪ್ರಸ್ತುತ 110 ಕೆ.ವಿ. ಅಫಜಲಪೂರ ವಿದ್ಯುತ್ ಉಪ ಕೇಂದ್ರದ ಎಫ್–8 ಶಿರವಾಳ ಫೀಡರ್‌ನಿಂದ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಸದರಿ ಪ್ರದೇಶಗಳಿಗೆ ಅಫಜಲಪೂರ ಉಪ ಕೇಂದ್ರದಿಂದ 11 ಕೆ.ವಿ. ಹೊಸ ಮಾರ್ಗದ ಕಾಮಗಾರಿಗಳನ್ನು ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯು ಕೈಗೆತ್ತಿಕೊಂಡಿದ್ದು, ಜುಲೈ 2015ರ ಅಂತ್ಯದೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು. ಈ ಕಾಮಗಾರಿಗಳು ಪೂರ್ಣಗೊಂಡ ನಂತರ ಅಳ್ಳಗಿ (ಬಿ) ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ಉತ್ತಮ ವಿದ್ಯುತ್ ಸರಬರಾಜು ಆಗಲಿದೆ. ಸಾಗನೂರು ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಿಗೆ ಜೇವರ್ಗಿ ತಾಲ್ಲೂಕಿನ 33/11 ಕೆ.ವಿ. ಅಂಕಲಗ ವಿದ್ಯುತ್ ಉಪಕೇಂದ್ರದಿಂದ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ.

ಪ್ರಸ್ತುತ, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯವರು ಅಫಜಲಪೂರ ತಾಲ್ಲೂಕಿನಲ್ಲಿರುವ ರೈತರ ಪಂಪುಸೆಟ್ಟುಗಳಿಗೆ ಅಗತ್ಯ ವಿದ್ಯುತ್ ಪೂರೈಕೆಗಾಗಿ ಡಿಗ್ಗಿಕ್ರಾಸ್ ಹತ್ತಿರ ಅಳ್ಳಗಿ (ಬಿ) ಗ್ರಾಮದಲ್ಲಿ ಮತ್ತು ಸಾಗನೂರು ಹತ್ತಿರ 33/11 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರಗಳನ್ನು ಸ್ಥಾಪಿಸಲು ದೀನ ದಯಾಳು ಉಪಧ್ಯಾಯ ಗ್ರಾಮಜ್ಯೋತಿ ಯೋಜನೆ (DDUGJY) ಯಡಿ ಆರ್.ಇ.ಸಿ ಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪಶುಸಂಗೋಪನ ಹಾಗೂ ಮುಜರಾಯಿ ಸಚಿವರು) (ಇಂಧನ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ಉತ್ತರವನ್ನು ಸಂಪೂರ್ಣವಾಗಿ ಒದಗಿಸಲಾಗಿದ್ದು, ಈಗಾಗಲೇ ಸದಸ್ಯರು ನನ್ನೊಂದಿಗೆ ಮಾತನಾಡಿದ್ದಾರೆ. ದೀನ ದಯಾಳು ಉಪಾಧ್ಯಾಯ ಗ್ರಾಮಜ್ಯೋತಿ ಯೋಜನೆ (DDUGJY) ಯು.ಡಿ.ಆರ್.ಇ.ಸಿಗೆ ಪ್ರಸ್ತಾವನೆಯನ್ನು ಸಲ್ಲಿಸಿದೆ. ಇದನ್ನು ತಗಾದೆ ಮಾಡಿ, ಆದಷ್ಟು ಬೇಗ ಮಾಡಿಸುವ ಪ್ರಯತ್ನವನ್ನು ಮಾಡುತ್ತೇವೆ.

ಅಧ್ಯಕ್ಷರು:– ಆದಷ್ಟು ಬೇಗ ಮಂಜೂರು ಮಾಡಿಸುವ ವ್ಯವಸ್ಥೆ ಮಾಡಿ.

7. **ವಿಷಯ: ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಕೆಂಭಾವಿ ಪಟ್ಟಣವನ್ನು ತಾಲ್ಲೂಕು ಕೇಂದ್ರವನ್ನಾಗಿ ಘೋಷಣೆ ಮಾಡುವ ಬಗ್ಗೆ.**

ಶ್ರೀ ಗುರು ಪಾಟೀಲ ಶಿರವಾಳ (ಶಹಾಪುರ):– ಮಾನ್ಯ ಅಧ್ಯಕ್ಷರೆ, ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಕೆಂಭಾವಿ ಪಟ್ಟಣವನ್ನು ತಾಲ್ಲೂಕು ಕೇಂದ್ರವನ್ನಾಗಿ ಘೋಷಣೆ ಮಾಡುವಂತೆ ಮಾನ್ಯ ಕಂದಾಯ ಸಚಿವರ ಗಮನವನ್ನು ಸೆಳೆಯುತ್ತೇನೆ.

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು):– ಮಾನ್ಯ ಅಧ್ಯಕ್ಷರೆ, ಉತ್ತರವನ್ನು ಒದಗಿಸಲಾಗಿದೆ.